ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಖಾಸಗಿ ಬಸ್ಸು ರಹದಾರಿಗಳ ಕುರಿತು

ಶ್ರೀ ಐವನ್ ಡಿ'ಸೋಜಾ(ನಾಮನಿರ್ದೇಶನ ಹೊಂದಿದವರು):-

1349 (1602) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಸಗಿ ಬಸ್ಸು ರಹದಾರಿಗಳನ್ನು ರಾಷ್ಟ್ರೀಕೃತಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದರೆ, ವಿವರ ನೀಡುವುದು;

(ಆ) ರಾಜ್ಯದಲ್ಲಿ ಎಷ್ಟು ಖಾಸಗಿ ಬಸ್ಸುಗಳು ಕಾರ್ಯನಿರ್ವಹಿಸುತ್ತಿವೆ ; ಇದರಿಂದ ರಾಜ್ಯ ಸಾರಿಗೆ ಇಲಾಖೆಗೆ ಉಂಟಾಗುವ ತೊಂದರೆಗಳೇನು; ಯಾವ ಯಾವ ಜಿಲ್ಲೆಗೆ ತೊಂದರೆಯುಂಟಾಗಿದೆ ;

(ಇ) ಪ್ರಸ್ತುತ, ಮಂಗಳೂರು ನಗರದಲ್ಲಿ ಸಂಚರಿಸುವ ನಗರ ಸಾರಿಗೆ ಬಸ್ಸುಗಳೆಷ್ಟು ; ಯಾವ ಜಿಲ್ಲೆಗಳಲ್ಲಿ ನಗರ ಸಾರಿಗೆ ಬಸ್ಸುಗಳನ್ನು ಸಂಚಾರಕ್ಕೆ ಹಾಕಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಲ್ಲಾ ಮಾರ್ಗಗಳನ್ನು ರಾಷ್ಟ್ರೀಕರಣಗೊಳಿಸಿದರೆ ರಾಜ್ಯ ಸರ್ಕಾರಕ್ಕೆ ಎಷ್ಟು ಹಣಕಾಸಿನ ಹೊರೆಯಾಗುವ ಸಾಧ್ಯತೆ ಇದೆ ; (ವಿವರ ನೀಡುವುದು)

(ಉ) ಖಾಸಗಿ ಎಷ್ಟು ಮಾಲೀಕರು ಲಾಭ ಬರುವ ಮಾರ್ಗಗಳಲ್ಲಿ ಮಾತ್ರ ಬಸ್ಸುಗಳನ್ನು ಒದಗಿಸುತ್ತಾರೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)